**OS: 71/2018**

**D .W-1**

**<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ</u>**

ದಿನಾಂಕಃ 12.09.2024 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಪಾಟೀ ಸವಾಲು ಃ ವಾದಿ ಪರ ಶ್ರೀ ಎಸ್.ಬಿ ವಕೀಲರಿಂದ,</u>**

ನನ್ನ ಮುಖ್ಯವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ನಾನೇ ನಮ್ಮ ವಕೀಲರಿಗೆ ಮಾಹಿತಿ ಕೊಟ್ಟಿರುತ್ತೇನೆ. ನನ್ನ ದೊಡ್ಡಮ್ಮ ದಾವಾ ಆಸ್ತಿಗಳ ಮೇಲೆ ಪಾಲು ವಿಭಾಗ ಕೋರಿ ದಾವೆ ಸಲ್ಲಿಸಿದ್ದಾರೆ. ನಮ್ಮ ನನ್ನ ತಂದೆ ಮತ್ತು ನನ್ನ ದೊಡ್ಡಪ್ಪರ ನಡುವೆ ಪಾಲು ವಿಭಾಗ ಆಗದೆ ಇರುವ ಕಾರಣ ಪಾಲು ವಿಭಾಗ ಕೋರಿ ವಾದಿಗಳು ದಾವೆ ಸಲ್ಲಿಸಿದ್ದಾರೆ ಎಂದರೆ ಸರಿ. ನನ್ನ ತಂದೆ ಮತ್ತು ನನ್ನ ದೊಡ್ಡಪ್ಪ ಯಾವಾಗ ವಿಭಾಗ ಮಾಡಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ ನನ್ನ ತಂದೆಗೆ ಆ ಬಗ್ಗೆ ಮಾಹಿತಿ ಇರುತ್ತದೆ. ವಾದಿ ಭಾಗಾಂಶ ಕೊಡಬೇಕಾಗುತ್ತದೆ ಎಂಬ ಕಾರಣಕ್ಕಾಗಿ ವಿಭಾಗ ಆಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆಗೆ ವಿದ್ಯಾಭ್ಯಾಸವನ್ನು ಕೊಡಿಸಿದ್ದು ನನ್ನ ತಂದೆಯ ಅಣ್ಣ ಮತ್ತು ಅಕ್ಕ ಎಂದರೆ ಸರಿಯಲ್ಲ. ಅವರೇ ನನ್ನ ತಂದೆಗೆ ನೌಕರಿಯನ್ನು ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ಉಜ್ಜಯನಿಯಲ್ಲಿ ನನ್ನ ದೊಡ್ಡಪ್ಪ ಮತ್ತು ದೊಡ್ಡಮ್ಮ ತೆಂಗಿನ ಕಾಯಿ ವ್ಯಾಪಾರವನ್ನು ಮಾಡುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ.

1985 ರಲ್ಲಿ ನನ್ನ ತಂದೆ ದಾವಣಗೆರೆಯಲ್ಲಿ ಒಂದು ನಿವೇಶನವನ್ನು ಖರೀದಿಸಿರುತ್ತಾರೆ ಎಂದರೆ ಸರಿ. ದಿನಾಂಕ 02.07.2018 ರಲ್ಲಿ ನನ್ನ ತಂದೆ ಕೊಟ್ಟೂರಿನಲ್ಲಿ ಒಂದು ನಿವೇಶನವನ್ನು ತಮ್ಮ ಹೆಸರಿನಲ್ಲಿ ಖರೀದಿಸಿರುತ್ತಾರೆ ಎಂದರೆ ಸರಿ. ನನ್ನ ತಂದೆ ಕಾಲವಾದ ನಂತರ ಸದರಿ ನಿವೇಶನದ ಖಾತೆಯೂ ನಮ್ಮ ತಾಯಿ ಮತ್ತು ನಮ್ಮ ಹೆಸರಿಗೆ ಬಂದಿದೆ ಎಂದರೆ ಸರಿ. ದಾವಾಣರೆಗೆಯಲ್ಲಿ ಖರೀಸಿದ ನಿವೇಶನದ ಖಾತೆಯೂ ನನ್ನ ತಂದೆ ಕಾಲವಾದ ನಂತರ ನನ್ನ ತಾಯಿಯ ಹೆಸರಿನಲ್ಲಿ ಇಂದಿಗೂ ಇದೆ ಎಂದರೆ ಸರಿ. ನನ್ನ ತಂದೆ ಮತ್ತು ನನ್ನ ದೊಡ್ಡಪ್ಪ ವಿಭಾಗ ಮಾಡಿಕೊಂಡ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ. ಇಂದಿಗೂ ನನ್ನ ತಂದೆ ಮತ್ತು ನನ್ನ ದೊಡ್ಡಪ್ಪ ಮತ್ತು ವಾದಿ ನಡುವೆ ಯಾವುದೇ ವಿಭಾಗ ಆಗಿಲ್ಲ ಆದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಮುಂದುವರೆದ ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ,**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**